484(1122) ಶ್ರೀ ವಿ.ಸೋಮಣ್ಣ(ಬನ್ನಿಪೇಟೆ) ಮಾನ್ಯ ಬೃಹತ್,ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಕೈಗಾರಿಕೆಗಳು ಸ್ಥಾಪನೆಯಾಗುತ್ತಿದ್ದರೂ ಸಹ ಕನ್ನಡಿಗರಿಗೆ ಉದ್ಯೋಗ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದಲ್ಲಿ, ಡಾ।।ಸರೋಜಿನಿ ಮಹಷಿ ವರದಿ ಪ್ರಕಾರ ಕನ್ನಡಿಗರಿಗೆ ಉದ್ಯೋಗಾವಕಾಶಗಳು ಲಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಪಿ.ಜಿ. ಆರ್.ಸಿಂಧ್ಯ (ಬೃಹತ್,ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು) :

ಅ) ಬಂದಿದೆ.

ಆ) ಡಾ.ಸರೋಜಿನಿ ಮಹಿಷಿ ವರದಿಯ ಶಿಫಾರಸ್ಸುಗಳ ಆಧಾರದ ಮೇಲೆ ರಾಜ್ಯದಲ್ಲಿ ಸ್ಥಾಪಿತವಾಗುವ ಕೈಗಾರಿಕಾ ಘಟಕಗಳಲ್ಲಿ ಸ್ಥಳಿಯರಿಗೆ ಉದ್ಯೋಗಾವಕಾಶ ನೀಡುವ ಕುರಿತು ಈ ಕೆಳಕಂಡ ಷರತ್ತುಯುಗಳನ್ನು ರಾಜ್ಯದ ಸತತ ಕೈಗಾರಿಕಾ ನೀತಿಗಳ ಅಡಿಯಲ್ಲಿ ವಿಧಿಸಲಾಗಿದೆ:

"ಎಲ್ಲಾ ಹೊಸ ಕೈಗಾರಿಕಾ ಬಂಡವಾಳ ಹೂಡಿಕೆಯ ಸಾಧ್ಯವಿರುವಷ್ಟು ಅತಿ ಕೆಚ್ಚಿನ ಸಂಖ್ಯೆಯಲ್ಲಿ ಹೆಚ್ಚುವರಿ ಉದ್ಯೋಗಾವಕಾಶಗಳನ್ನು ಕಲ್ಪಿಸಬೇಕಲ್ಲದೆ ಸ್ಥಳೀಯ ಜನರಿಗೆ ನೀಡಕ್ಕದ್ದು. (ಸಿ ಮತ್ತು ಡಿ ಪ್ರವರ್ಗಗಳ ವಿಷಯದಲ್ಲಿ ಶೇಕಡ 100ರಷ್ಟು ಉದ್ಯೋಗಾವಕಾಶವನ್ನು ಸ್ಥಳೀಯ ಜನರಿಗೆ ನೀಡಬೇಕು)" ಹಾಗೂ ಉತ್ತೇಜನಗಳನ್ನು ವಿತರಣೆ ಮಾಡುವಾಗ ಈ ವಿಚಾರದ ಮೇಲ್ವಿಚಾರಣೆ ನೋಡಿಕೊಳ್ಳತಕ್ಕದ್ದು."

50 ಅಥವಾ ಅದಕ್ಕಿಂತ ಹೆಚ್ಚು ಉದ್ಯೋಗಗಳನ್ನು ಹೊಂದಿರುವ ಮತ್ತು ರಾಜ್ಯ ಸರ್ಕಾರ/ ಸರ್ಕಾರಿ ಸಂಸ್ಥೆಗಳಿಂದ ಮೂಲಭೂತ ಸೌಕರ್ಯ ಹಾಗೂ ರಿಯಾಯಿತಿಗಳನ್ನು ಪಡೆದಿರುವ ಕೈಗಾರಿಕಾ ಘಟನೆಗಳಲ್ಲಿ ಮೇಲ್ಕಂಡ ಷರತ್ತು ಪಾಲನೆ ಬಗ್ಗೆ ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯವರು ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ರಚಿಸಲಾಗಿದೆ.

ಜೊತೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಜಮೀನು ಪಡೆದ ಘಟಕಗಳು ಭೂಸ್ವಾಧೀನದಿಂದ ಜಮೀನು ಕಳೆದುಕೊಂಡ ರೈತರ ಪ್ರತಿಯೊಂದು ಕುಟುಂಬದ ಬಬ್ಬ ಸದಸ್ಯರಿಗೆ ಉದ್ಯೋಗ ನೀಡಬೇಕೆಂದು ನಿಬಂಧನೆಯನ್ನು ಸಹ ಗುತ್ತಿಗೆ ಮತ್ತು ಮಾರಾಟ ಒಪ್ಪಂದದಲ್ಲಿ ಅಳವಡಿಸಲಾಗಿದೆ.

ಕನ್ನಡ ಪರ ಸಂಘ ಸಂಸ್ಥೆಗಳು ಮತ್ತು ಕನ್ನಡ ಸಭಿವೃದ್ಧಿ ಪ್ರಾಧಿಕಾರವು ಸರ್ಕಾರದ ಗಮನವನ್ನು ಈ ನಿಟ್ಟಿನಲ್ಲಿ ಸೆಳೆಯುತ್ತಿದ್ದು ಈ ವಿಚಾರದಲ್ಲಿ ಹಿಂದಿನ ವಸ್ತುಸ್ಥಿತಿಯನ್ನು ಅವಲೋಲಕಿಸಲು ಹಾಗೂ ಮುಂದಿನ ಅಗತ್ಯ ಕ್ರಮ ಜರುಗಿಸಲು ಒಂದು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲು ತೀರ್ಮಾನಿಸಿದೆ.